# Bangalore
# Regional News
# 06.02.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಪ್ರಸಕ್ತ ಸಾಲಿನ ಆಯವ್ಯಯ ಕುರಿತ ಪೂರ್ವಭಾವಿ ಸಭೆ – ಅಭಿವೃದ್ಧಿ ಯೋಜನೆಗಳ ಪ್ರಗತಿ ಪರಿಶೀಲನೆ
2. ಬೆಂಗಳೂರಿನಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಗರ ಪ್ರದಕ್ಷಿಣೆ : ಶೀಘ್ರವೇ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚನೆ
3. ಏರೋ ಇಂಡಿಯಾ–2025ಕ್ಕೆ ದಿನಗಣನೆ ; ಯಲಹಂಕ ವಾಯುನೆಲೆಯಲ್ಲಿ ವಿವಿಧ ಯುದ್ಧ ವಿಮಾನಗಳ ವೈಮಾನಿಕ ಅಭ್ಯಾಸ
4. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ಮಾತನಾಡುವುದು ಸರಿಯಲ್ಲ ; ಸ್ವಪಕ್ಷೀಯರ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅಸಮಾಧಾನ
5. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ನಾಳೆ ರಾಜ್ಯ ಪ್ರವಾಸ : ರಾಣಿಬೆನ್ನೂರಿನಲ್ಲಿ ಕರ್ನಾಟಕ ವೈಭವ ಸಾಹಿತ್ಯ ಕಾರ್ಯಕ್ರಮದಲ್ಲಿ ಭಾಗಿ

*****************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದಿನಿಂದ 2025–26ನೇ ಸಾಲಿನ ಇಲಾಖಾವಾರು ಆಯವ್ಯಯ ಪೂರ್ವಭಾವಿ ಸಭೆಗಳನ್ನು ನಡೆಸುತ್ತಿದ್ದಾರೆ.

ತಮ್ಮ ಕಾವೇರಿ ನಿವಾಸದಲ್ಲಿ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಒಳಾಡಳಿತ, ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ, ಸಣ್ಣ ಕೈಗಾರಿಕೆ, ಇಂಧನ, ಲೋಕೋಪಯೋಗಿ ಮತ್ತು ಕಾರ್ಮಿಕ ಇಲಾಖೆ ಸಭೆ ಸುತ್ತಿದ್ದಾರೆ.

ಮಧ್ಯಾಹ್ನದ ನಂತರ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ, ಆಹಾರ ಮತ್ತು ನಾಗರಿಕ ಸರಬರಾಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಹಕಾರ, ರೇಷ್ಮೆ ಹಾಗೂ ಪಶುಸಂಗೋಪನಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯನ್ನು ನಡೆಸಿ ಅಭಿವೃದ್ಧಿ ಯೋಜನೆಗಳ ಪ್ರಗತಿಯ ಕುರಿತು ಪರಾಮರ್ಶೆ ನಡಸಲಿದ್ದಾರೆ.

*****************

ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಇಂದು ಬೆಂಗಳೂರು ನಗರ ಪ್ರದಕ್ಷಿಣೆ ನಡೆಸಿದರು.

ಹೆಬ್ಬಾಳ ಬಳಿ ಫ್ಲೈಓವರ್ ಕಾಮಗಾರಿಯನ್ನು ಪರಿಶೀಲಿಸಿದ ಅವರು, ಶೀಘ್ರದಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಬಳಿಕ ಅವರು, ಬೆಂಗಳೂರಿನ ಗೊರಗುಂಟೆಪಾಳ್ಯ ಸಮೀಪ ಅಂಡರ್‌ಪಾಸ್ ಹಾಗೂ ರಸ್ತೆ ಮತ್ತು ಮೆಟ್ರೋ ವ್ಯವಸ್ಥೆಯ ಡಬಲ್‌ಡೆಕ್ಕರ್ ನಿರ್ಮಾಣ ಸಂಬಂಧ ಸ್ಥಳ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಬಿಡಿಎ ಆಯುಕ್ತ ಜೈರಾಮ್, ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಬಿಎಂಆರ್‌ಡಿಎ ಆಯುಕ್ತರಾದ ರಾಜೇಂದ್ರ ಚೋಳನ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

*****************

ಏರೋ ಇಂಡಿಯಾ 2025ಕ್ಕೆ ರಾಜಧಾನಿ ಬೆಂಗಳೂರು ಸಜ್ಜಾಗಿದ್ದು, ಯಲಹಂಕದಲ್ಲಿರುವ ಭಾರತೀಯ ವಾಯುಪಡೆಯ ವಾಯುನೆಲೆಯಲ್ಲಿ ಯುದ್ಧ ವಿಮಾನಗಳ ವೈಮಾನಿಕ ಅಭ್ಯಾಸ ಆರಂಭಗೊಂಡಿದೆ.

ದೇಶೀಯ ಮತ್ತು ವಿದೇಶಿ ಯುದ್ಧ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳನ್ನು ಈಗಾಗಲೇ ಸ್ವಾಗತಿಸಲಾಗಿದೆ. ಯಲಹಂಕ, ಹೆಬ್ಬಾಳ, ಅಮೃತಹಳ್ಳಿ, ಕೊಡಿಗೆಹಳ್ಳಿ ಸೇರಿದಂತೆ ಏರ್‌ಬೇಸ್ ಸುತ್ತಮುತ್ತಲಿನ ಪ್ರದೇಶದಲ್ಲಿ ಲೋಹದ ಹಕ್ಕಿಗಳ ಘರ್ಜನೆ ಕೇಳಿ ಬರುತ್ತಿದೆ.

ಇದೇ 10ರಿಂದ 14ರವರೆಗೆ ನಡೆಯಲಿರುವ ಏರ್ ಶೋ ದಲ್ಲಿ ಅತ್ಯಾಧುನಿಕ ರಕ್ಷಣಾ ತಂತ್ರಜ್ಞಾನ, ರೋಮಾಂಚಕ ವೈಮಾನಿಕ ಸಾಹಸಗಳು ಮತ್ತು ಜಾಗತಿಕ ವಾಯುಯಾನ ಶ್ರೇಷ್ಠತೆಯನ್ನು ಪ್ರದರ್ಶಿಸಲಿದೆ.

ಏರ್ ಶೋ ಟಿಕೆಟ್ ದರ ನಿಗದಿಪಡಿಸಲಾಗಿದ್ದು  ಬಿಸಿನೆಸ್ ಪಾಸ್– ಭಾರತೀಯ ಪ್ರಜೆಗಳಿಗೆ 5 ಸಾವಿರ ರೂಪಾಯಿ ಮತ್ತು ವಿದೇಶಿ ಪ್ರಜೆಗಳಿಗೆ 50 ಅಮೆರಿಕನ್ ಡಾಲರ್ ನಿಗದಿ ಮಾಡಲಾಗಿದೆ.

ಎಡಿವಿಎ ಪಾಸ್– ಭಾರತೀಯ ಪ್ರಜೆಗಳಿಗೆ 1 ಸಾವಿರ ರೂಪಾಯಿ ಮತ್ತು ವಿದೇಶಿ ಪ್ರಜೆಗಳಿಗೆ 50 ಅಮೆರಿಕನ್ ಡಾಲರ್ ನಿಗದಿ ಮಾಡಲಾಗಿದೆ.

ಜನರಲ್ ವಿಸಿಟರ್ ಪಾಸ್– ಭಾರತೀಯ ನಾಗರಿಕರಿಗೆ 2 ಸಾವಿರದ 500 ರೂಪಾಯಿ ಮತ್ತು ವಿದೇಶಿ ಪ್ರಜೆಗಳಿಗೆ 50 ಅಮೆರಿಕನ್ ಡಾಲರ್ ನಿಗದಿ ಮಾಡಲಾಗಿದೆ.

ಈ ಪಾಸ್‌ಗಳ ಮೂಲಕ ಜನರು ಏರೋ ಇಂಡಿಯಾ 2025ರ ಪ್ರದರ್ಶನಗಳು, ಸಮ್ಮೇಳನಗಳು ಮತ್ತು ವಾಯು ಪ್ರದರ್ಶನಗಳಿಗೆ ಪ್ರವೇಶವನ್ನು ಪಡೆಯಬಹುದಾಗಿದೆ.

ವಿದೇಶಿ ಸಂದರ್ಶಕರ ಟಿಕೆಟ್‌ಗಳ ಬೆಲೆಯನ್ನು ಅಮೆರಿಕದ ಡಾಲರ್‌ನಲ್ಲಿ ನಿಗದಿ ಮಾಡಲಾಗಿದೆ. ಸಾರ್ವಜನಿಕ ಸಂದರ್ಶಕರು, ವಿಐಪಿ ಪ್ರವೇಶ ಮತ್ತು ವ್ಯಾಪಾರ ಪ್ರತಿನಿಧಿಗಳಿಗೆ ಪ್ರತ್ಯೇಕ ಟಿಕೆಟ್ ದರಗಳನ್ನು ನಿಗದಿ ಮಾಡಲಾಗಿದೆ.

*****************

ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ಯಾವ ಕ್ಷಣದಲ್ಲಾದರೂ ಆಗಬಹುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನುಭವದ ಕೊರತೆ ಇದೆ ಎಂಬ ಮಾಜಿ ಸಚಿವ ಶ್ರೀರಾಮುಲು ಹೇಳಿಕೆ ಕುರಿತಂತೆ ಪ್ರತಿಕ್ರಿಯಿಸಿ ರಾಜ್ಯಾಧ್ಯಕ್ಷನಾಗಿ ಅನುಭವ ಕಡಿಮೆಯಿರಬಹುದು. ಪಕ್ಷದ ಕಾರ್ಯಕರ್ತನಾಗಿ ಹೆಚ್ಚು ಅನುಭವವಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ, ತಟಸ್ಥ ಎಂದು ಹೇಳಿಕೊಳ್ಳುವ ನಾಯಕರು ಮೊದಲಿಗೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ಮಾತನಾಡುವವರ ಬಾಯಿ ಮುಚ್ಚಿಸಲಿ ಎಂದು ಹೇಳಿದ್ದಾರೆ. ಪಕ್ಷಕ್ಕೆ ಯಡಿಯೂರಪ್ಪರವರ ಕೊಡುಗೆ ಇಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಯಾವುದೋ ಎರಡು ಹೋರಾಟಕ್ಕೆ ಗೈರಾದರೆ ಅದು ಕಾಂಗ್ರೆಸ್ ಜೊತೆ ಹೊಂದಾಣಿಕೆ ರಾಜಕೀಯವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

*****************

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ನಾಳೆ ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ.

ಒಂದು ದಿನದ ಪ್ರವಾಸದ ಭಾಗವಾಗಿ ಅವರು, ಹಾವೇರಿಯ ರಾಣೆಬೆನ್ನೂರಿಗೆ ಭೇಟಿ ನೀಡಲಿದ್ದು, ಅಲ್ಲಿ ಅವರು, ಕರ್ನಾಟಕ ವೈಭವ ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

*****************

ಹತ್ತು ಸುಗ್ರೀವಾಜ್ಞೆ ಜಾರಿಗೆ ತಂದರೂ ಸಣ್ಣ ಹಣಕಾಸು ಸಂಸ್ಥೆಗಳ ಕಿರುಕುಳ ತಪ್ಪಿಸಲು ಸಾಧ್ಯವಿಲ್ಲ ಎಂದು ಸಂಸದ ಜಗದೀಶ್ ಶೆಟ್ಟರ್ ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಣ್ಣ ಹಣಕಾಸು ಸಂಸ್ಥೆಗಳ ಕಿರುಕುಳ ವಿಚಾರದಲ್ಲಿ ರಾಜ್ಯ ಸರ್ಕಾರ ನಿರ್ಲಕ್ಷ್ಯ ತೋರಿದೆ.

ಸರ್ಕಾರ ಕಾನೂನು ರೂಪಿಸುವುದರಿಂದ ಹಣಕಾಸು ಸಂಸ್ಥೆಗಳ ಮೇಲೆ ನಿಗಾ ಇಡಲು ಸಾಧ್ಯವಿಲ್ಲ. ಬಡ, ಮಧ್ಯಮ ವರ್ಗದವರಿಗೆ ಸುಲಭವಾಗಿ ಸಾಲ ಸಿಗುವ ವ್ಯವಸ್ಥೆ ಮಾಡಬೇಕು ಹಾಗೂ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ವಿವಿಧ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಧ್ವನಿ : ಸಂಸದ ಜಗದೀಶ್ ಶೆಟ್ಟರ್ (33 ಸೆಕೆಂಡ್ಸ್)

*****************

ರಾಜ್ಯದಲ್ಲಿ ಸಣ್ಣ ಹಣಕಾಸು ಸಂಸ್ಥೆಗಳು ಸಾಲಗಾರರಿಗೆ ಕಿರುಕುಳ ನೀಡುತ್ತಿರುವ ದೂರುಗಳು ಬರುತ್ತಿರುವ ಹಿನ್ನಲೆಯಲ್ಲಿ ರಾಜ್ಯ ಸರ್ಕಾರ ಕಠಿಣ ನಿಯಮಗಳನ್ನು ಜಾರಿಗೊಳಿಸಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನೊಂದಾಯಿತ ಲೇವಾದೇವಿ, ಗಿರವಿ ಸಂಸ್ಥೆಗಳು ಕರ್ನಾಟಕ ಲೇವಾದೇವಿ ಅಧಿನಿಯಮದಡಿ ಸಾರ್ವಜನಿಕರ ಭದ್ರತೆ ಸಾಲಗಳಿಗೆ ಗರಿಷ್ಠ ವಾರ್ಷಿಕ ಶೇಕಡ 14 ರಷ್ಟು ಹಾಗೂ ಭದ್ರತೆ ಇಲ್ಲದ ಸಾಲಗಳಿಗೆ ವಾರ್ಷಿಕ ಶೇಕಡ 16 ರಷ್ಟು ಬಡ್ಡಿ ವಿಧಿಸಬೇಕು.

ಹೆಚ್ಚುವರಿ ಬಡ್ಡಿ ವಿಧಿಸುತ್ತಿರುವ ಸಂಸ್ಥೆಗಳು ಕಂಡುಬಂದಲ್ಲಿ ಸಾರ್ವಜನಿಕರು ಸಹಕಾರ ಸಂಘಗಳ ಜಂಟಿ ನಿಬಂಧಕರ ಕಛೇರಿಯ 080-26612911 ದೂರವಾಣಿ ಸಂಖ್ಯೆಗೆ ಕರೆ ಮಾಡಿ, ದೂರು ನೀಡಬಹುದಾಗಿದೆ.

*****************

ಮುಂಬೈನಲ್ಲಿರುವ ಸೀ ಸ್ಕೌಟಿಂಗ್ ಕೇಂದ್ರವನ್ನು ಮಂಗಳೂರಿಗೆ ಸ್ಥಳಾಂತರಿಸಲು ಎಲ್ಲ ರೀತಿಯ ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕದ ಭಾರತ್ ಸ್ಕೌಟ್ಸ್ ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್.ಸಿಂಧ್ಯಾ ತಿಳಿಸಿದ್ದಾರೆ.

ಮಂಗಳೂರಿನ ಪಿಲಿಕುಳ ನಿಸರ್ಗಧಾಮದಲ್ಲಿ ನಿರ್ಮಾಣಗೊಂಡ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ತರಬೇತಿ ಕೇಂದ್ರದ ನೂತನ ಸಭಾಭವನ ಲೋಕಾರ್ಪಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಸ್ಕೌಟ್ ಗೈಡ್ಸ್‌ನಲ್ಲಿ ಸೀ ಸ್ಕೌಟ್ ವಿಭಾಗವಿದ್ದು, ಕರಾವಳಿಯಲ್ಲಿ ಸಮುದ್ರ ತೀರ ಇರುವುದರಿಂದ ಸೀ ಸ್ಕೌಟ್ ಕೇಂದ್ರವನ್ನು ಮುಂಬೈನಿಂದ ಮಂಗಳೂರಿಗೆ ಸ್ಥಳಾಂತರಿಸಲು ಇದು ಉತ್ತಮ ಸಂದರ್ಭ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.

*****************

ಸ್ವಚ್ಛ ಭಾರತ ಅಭಿಯಾನ ಯೋಜನೆಯಡಿ ದಾವಣಗೆರೆ ನಗರದ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡುವ ನಿಟ್ಟಿನಲ್ಲಿ ಬಜೆಟ್ ನಲ್ಲಿ ವಿಶೇಷ ಅನುದಾನ ಮೀಸಲಿಡಲಾಗಿದೆ ಎಂದು ಪಾಲಿಕೆ ಮೇಯರ್ ಕೆ.ಚಮನ್ ಸಾಬ್ ತಿಳಿಸಿದ್ದಾರೆ.

ಪಾಲಿಕೆಯ ಬಜೆಟ್ ಮಂಡನಾ ಸಭೆಯಲ್ಲಿ ಮಾತನಾಡಿದ ಅವರು, ನಗರವನ್ನು ಮಾಲಿನ್ಯ ಮುಕ್ತವಾಗಿಸುವ, ಕಸದ ವಿಲೇವಾರಿ ಸಮಸ್ಯೆಯಿಂದ ಮುಕ್ತಗೊಳಿಸುವ ನಿಟ್ಟಿನಲ್ಲಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ 27 ಕೋಟಿ ರೂಪಾಯಿ ಬಿಡುಗಡೆ ಮಾಡಲಾಗುವುದು ಎಂದು ಹೇಳಿದ್ದಾರೆ

ಧ್ವನಿ : ಮೇಯರ್ ಕೆ.ಚಮನ್ ಸಾಬ್ (37 ಸೆಕೆಂಡ್ಸ್)

*****************

ಉತ್ತರ ಕನ್ನಡ ಜಿಲ್ಲೆಯನ್ನು ಮಾದಕ ವಸ್ತು ಮುಕ್ತ ಜಿಲ್ಲೆಯನ್ನಾಗಿಸಬೇಕು ಎಂದು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿ ಪ್ರಿಯ ಸೂಚನೆ ನೀಡಿದ್ದಾರೆ.

ಮೆಡಿಕಲ್ ಶಾಪ್‌ಗಳಲ್ಲಿ ವೈದ್ಯರ ಅನುಮತಿ ಇಲ್ಲದೇ ಔಷಧಗಳನ್ನು ನೀಡುವವರ ವಿರುದ್ಧ ನಿಗಾ ವಹಿಸುವಂತೆ ಹಾಗೂ ನಿಷೇಧಿತ ಔಷದ ಹಾಗೂ ಮಾತ್ರೆಗಳ ಸರಬರಾಜು ಮತ್ತು ದಾಸ್ತಾನು ಬಗ್ಗೆ ನಿರಂತರವಾಗಿ ಪರಿಶೀಲಿಸುವಂತೆ ತಿಳಿಸಿದ್ದಾರೆ.

ಹದಿ ಹರೆಯದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಮಾದಕ ವಸ್ತುಗಳಿಗೆ ಬಲಿಯಾಗುತ್ತಿದ್ದು ಈ ಬಗ್ಗೆ ಎಚ್ಚರವಹಿಸುವಂತೆ ಸೂಚಿಸಿದ್ದಾರೆ.

*****************

ಜೀವಕ್ಕೆ ಆಪತ್ತು ತರುವ ಕ್ಯಾನ್ಸರ್‌ನಂತಹ ಹಲವು ಕಾಯಿಲೆಗಳ ಮೂಲ ಜೀವನಶೈಲಿ ಎಂಬುದು ಹಲವು ಸಂಶೋಧನೆಗಳಿಂದ ಸಾಬೀತಾಗಿದೆ ಎಂದು ವಿಜಯಪುರ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಸಂಪತ್ ಗುಣಾರಿ ಅಭಿಪಾಯಪಟ್ಟಿದ್ದಾರೆ.

ಧೂಮಪಾನ ಕ್ಯಾನ್ಸರ್ ಅಪಾಯವನ್ನು ಹೆಚ್ಚಿಸುವ ಪ್ರಮುಖ ಅಂಶವಾಗಿದೆ. ಅಧಿಕ ತೂಕ ಮತ್ತು ಬೊಜ್ಜು ಕೂಡ ಕ್ಯಾನ್ಸರ್ ಅಪಾಯವನ್ನು ಹೆಚ್ಚಿಸುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ.

*****************

<u>ಸಂಕ್ಷಿಪ್ತ ಸುದ್ದಿಗಳು</u>

1. ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಸಮನ್ವಯದಿಂದ ಕೆಲಸ ಮಾಡಿದ ಫಲವಾಗಿ ಚುನಾವಣಾ ಆಯೋಗದಿಂದ ಪ್ರಶಸ್ತಿ ದೊರೆತಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ.
2. ಯಾದಗಿರಿ ಜಿಲ್ಲೆಯ ಎಲ್ಲಾ ಶಾಲೆ, ಅಂಗನವಾಡಿ ಕೇಂದ್ರಗಳಲ್ಲಿನ ಮಕ್ಕಳ ಆರೋಗ್ಯ ತಪಾಸಣೆ ಕೈಗೊಂಡು ಶಸ್ತ್ರಚಿಕಿತ್ಸೆ ಅಗತ್ಯವಿರುವ ಸೀಳುತುಟಿ ತೊಂದರೆಯ ಮಕ್ಕಳಿಗೆ ನೆರವಾಗಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಹೇಶ ಬಿರಾದರ ತಿಳಿಸಿದ್ದಾರೆ.

********ಮುಕ್ತಾಯ********